854

ಮೈಸೂರ ಗೆಜೆಟ್

ಸರ್ಕಾರದಿಂದ ಪಾಯಿಷ್ ಆದ್ದು.

ಬೆಂಗಳೂರು, ಶನಿವಾರ, ಡಿಸಂಬರ್ ತಾ|| 7, ಸ್ರ್ 1889.

ಸೂಚನೆ ಈ ಭಾಗವನ್ನು ಪ್ರತ್ಯೇಕ ಕೀಲಿಸಿ ಇಡುವ ಬಗ್ಯೆ ಇದಕ್ಕೆ ಬೇರೆಯಾಗಿ ಪುಟ ಸಂಖ್ಯೆ ಕೊಡಲ್ಪಡುತ್ತೆ.

೨ನೇ ಭಾಗ.

ಇಂಡ್ಯಗವರ್ನಮೆಂಟ್, ರೆಸಿಡೆಂಟರು, ಚೀಫ್ ಜಡ್ಜ್ರೀರು, ವಗ್ಯೆರೇರಿಂದ ಕೊಡೋಣಾದ ಇಸ್ತಿಹಾರ್ನಾಮೆಗಳು.

ಫೈನ್ನಾನ್ಷಿಯಲ್ ಇಲಾಖಾ.

1882ನೇ ಇಸವಿಯ ಮೈಸೂರು ರೆಯಿಲ್‌ವೇ ಲೋನ್.

ತಾರೀಖು 6ನೇ ಜುಲೈ 1883.

ಲಂಡನ್‌ನಲ್ಲಿ ಬಡ್ಡೀ ಸಲ್ಲತಕ್ಕ ಬಗ್ಯೆ, ಪರಾ ಬರೆಯಲ್ಪಡಬಹುದಾದಂಥಾ ಸದರೀ ಸಾಲದ ಡಿಬೆಂಚರ್‌ಗಳ ಮೇಲೆ ಲಂಡನ್‌ನಲ್ಲಿ, ಸ್ಟ್ರಾಂಡ್ ಬೀದಿ 59ನೇ ನಂಬರ್ ಕಟ್ಟಣದಲ್ಲಿರುವ ಬ್ಯಾಂಕರ್‌ಗಳಾದ ಮೆಸ್ಸರ್ಸ್ ಕಾಪ್ಸ್ ಅಂಡ್‌ಕೋಯವರು ಬಡ್ಡೀಯನ್ನು ಪಾವತೀ ಮಾಡುವ ಬಗ್ಯೆ ಆವರುಗಳೊಡನೆ ಮೈಸೂರು ಗವರ್ನಮೆಂಟಿನವರು ಯೇರ್ಪಾಡು ಮಾಡಿಕೊಂಡಿರುವದರಿಂದ ಲಂಡನ್‌ನಲ್ಲಿ ತಮ್ಮ ಡಿಬೆಂಚರ್‌ಗಳಿಗೆ ಬಡ್ಡೀಯನ್ನು ತೆಗದುಕೊಳ್ಳಲಿಕ್ಕೆ ಯಿಷ್ಟಪ್ಪವುಳ್ಳ ಜನಗಳು ತಮ್ಮ ಡಿಬೆಂಚರ್‌ಗಳನ್ನು ಎಫೇಸಮೆಂಟ್ ಯಾನೇ ಪರಾ ಬಗ್ಯೆ ಇದರಡಿ ರುಜೂ ಮಾಡಿರುವವರ ಆಫೀಸಿಗೆ ಕಳುಹಿಸತಕ್ಕದ್ದು.

ಬಡ್ಡಿಯು, ಮದ್ರಾಸಿನಲ್ಲಿ ಮದರಾಸ್ ಬ್ಯಾಂಕಿನ ಮೇಲೆ, ಡ್ಯೂಟ್ಸ್‌ಕೇಟೂದ ಡಿಮಾಂಡ್ ಡ್ರಾಫ್ಟ್ಸ್ ಯೆಂಬ ಚೆಕ್ಕುಗಳ ಮೂಲಕ ರೂಪಾಯಿಗಳಾಗಿ ಕೊಡಲ್ಪಡುವದು.

ಎಫೇಸಮೆಂಟ್ ಬಗ್ಯೆ ಫೀ ಯೇನೂ ಚಾರ್ಜ್ ಮಾಡಲ್ಪಡಲಾರದು.

ಹೆಚ್. ಹಡ್ಸನ್,
ಕಾಂಪ್ಟ್ರೋಲರ್.

ಫಾರೆಸ್ಟ್ಸ್ ಇಲಾಖಾ.

ತಾರೀಖು 21ನೇ ಸೆಪ್ಟಂಬರ್ 1889.

ಇದರಿಂದ ಸಮಸ್ತ ಜನಗಳಿಗೂ ತಿಳಿಯಪಡಿಸುವದೇನಂದರೆ, ಮೈಸೂರು ದೇಶದಲ್ಲಿ ಉತ್ಪತ್ತಿಯಾದ ಗಂಧದ ಸಾಲಿಯಾನಾ ಹರಾಜುಗಳು ಈ ಕೆಳಗೆ ನಮೂದಾಗುವ ಜಾಗಾಗಳಲ್ಲಿ ಅವುಗಳ ಬಾಜಾದಲ್ಲಿ ನಮೂದಿಸಿರುವ ತಾರೀಖುಗಳಲ್ಲಿ ಆಯಾಯ ಡಿಸ್ಟ್ರಿಕ್ಟ್ ಪೆಬ್ಲೈಟ ಕಮ್ಮಿಷನರವರು ವ ಫಾರೆಸ್ಟ್ ಆಫಿಸರರುಗಳಿಂದ ನಡಿಸಲ್ಪಡುವವು.

ಮೈಸೂರು ಡಿಸ್ಟ್ರಿಕ್ಟು—ಶ್ರೀರಂಗಪಟ್ಣ ಕೋರಿ	9ನೇ ಡಿಸಂಬರ್ 1889	..	400	ಟ್ಯಗಳು
ಪುಣಸೂರು ಡಿಟೋ ..	14ನೇ ಡಿಟೋ	..	600	ಡಿಟೋ
ಬೆಂಗಳೂರು ಡಿಸ್ಟ್ರಿಕ್ಟು—ಬೆಂಗಳೂರು ಕೋರಿ	19ನೇ ಡಿಟೋ	..	150	ಡಿಟೋ

ಹರಾಜಿನ ಪರತ್ತುಗಳು—1887ನೇ ಇಸವಿ ಆಗಸ್ಟ್ 27 ಮತ್ತು ಸೆಪ್ಟಂಬರ್ 3ನೇ, ಮರ್ಜುಂಗಳ 34, 35ನೇ ನಂಬರ್ ಗೆಜೆಟಿಗಳಲ್ಲಿ ಪಾಬಿಷ್ ಮಾಡಲ್ಪಟ್ಟ ಇಸ್ತಿಹಾರ್‌ಗಳನ್ನು ನೋಡಿಕೊಳ್ಳತಕ್ಕದ್ದು. ಮತ್ತು ಸದರೀ ಇಸ್ತಿಹಾರ್‌ಗಳು ಹರಾಜ್ ಕಾಲದಲ್ಲಿ ಓದಲ್ಪಡುವವು.